೮

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಸ್.ವ್ಹಿ ಸಂಕನೂರ ಇವರು ನಿಯಮ 72 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಕುರಿತು.

**ಪ್ರಶ್ನೆ:**

ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮೊರಾರ್ಜಿ/ ಕಿತ್ತೂರು ರಾಣಿ ಚೆನ್ನಮ್ಮ ಮುಂತಾದ ವಸತಿ ಶಾಲೆಗಳಲ್ಲಿ ಪ್ರಾಢ ಶಾಲಾ ವಿಭಾಗಕ್ಕೆ 2016 ರಲ್ಲಿ ನೇಮಕಾತಿ ಆದವರಿಗೆ "TET" ಮಾದರಿಯ" ಪರೀಕ್ಷೆ ಕಡ್ಡಾಯ ಎಂಬ ನೆಪ ಮುಂದುಮಾಡಿ, ಅವರ ಪ್ರೊಬೆಷನರಿ ಅವಧಿಯನ್ನು ಘೋಷಣೆ ಮಾಡದಿರುವುದರಿಂದ ವಾರ್ಷಿಕ ಬಡತಿಯಿಂದ ವಂಚಿತರಾಗಿದ್ದಾರೆ ಎಂಬ ವಿಷಯವನ್ನು ಶಾಲಾ ಶಿಕ್ಷಣ ಹಾಗೂ ಸಾಕ್ಷರತ ಸಚಿವರ ಗಮನ ಸೆಳೆಯಲು ಬಯಸುವುದು.

**ಉತ್ತರ:**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 830 ವಸತಿ ಶಾಲೆ/ ಕರ್ನಾಟಕದ ಉಚ್ಚ ನ್ಯಾಯಾಲಯದ ಆದೇಶದಂತೆ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಅವರುಗಳು ಸಲ್ಲಿಸಿದ ಸೇವೆಗೆ ಅನುಗುಣವಾಗಿ ಮತ್ತು ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳು-2011 ರಂತೆ ಸೇವಾ ಕೃಪಾಂಕ ನೀಡಿ 630 ಪ್ರಾಂಶುಪಾಲರು/ ಶಿಕ್ಷಕರುಗಳನ್ನು ಆಯ್ಕೆಗೊಳಿಸಿ ನೇಮಕಾತಿ ಆದೇಶ ನೀಡಲಾಗಿದೆ.

ಸೇವಾ ಕೃಪಾಂಕ ನೀಡಿ ನೇಮಕಗೊಂಡ ಬೋಧಕ ಸಿಬ್ಬಂದಿಗಳ ನೇಮಕಾತಿ ಆದೇಶದಲ್ಲಿ "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಏರ್ಪಡಿಸುವ Teachers Eligibility Test (TET) ಮಾದರಿಯ ಪರೀಕ್ಷೆಯಲ್ಲಿ ಉತ್ತೀರ್ಣರಾದ ನಂತರವೇ ನಿಮ್ಮ ಪರಿವೀಕ್ಷಣಾ ಅವಧಿಯನ್ನು ಘೋಷಿಸಲಾಗುವುದು"ಎಂದು ಷರತ್ತನ್ನು ವಿಧಿಸಲಾಗಿದೆ.

ದಿನಾಂಕ: 14.03.2017 ರಂದು ಸಂಘದ 68 ನೇ ಆಡಳಿತ ಮಂಡಳಿ ಸಭೆಯಲ್ಲಿ ರಾಜ್ಯ ಶಿಕ್ಷಣ ತರಬೇತಿ ಸಂಸ್ಥೆಯ ನಿರ್ದೇಶಕರು ಮಾತನಾಡಿ, ಶಿಕ್ಷಣ ಇಲಾಖೆಯು ವರ್ಷದಲ್ಲಿ 2 ಬಾರಿ T.E.T ಪರೀಕ್ಷೆಗಳನ್ನು ನಡೆಸುತ್ತಿದ್ದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಸೇವಾ ಕೃಪಾಂಕ ಪಡೆದು ಆಯ್ಕೆಯಾದ ಶಿಕ್ಷಕರುಗಳಿಗೆ ಈ ಮಾಹಿತಿಯನ್ನು ನೀಡಲು ಮತ್ತು ಇವರುಗಳಿಗೆ ಗರಿಷ್ಠ 3 ಬಾರಿ ಪರೀಕ್ಷೆಗಳಿಗೆ ಹಾಜರಾಗಲು ಅವಕಾಶವಿರುವುದಾಗಿ ತಿಳಿಸಿ ವಸತಿ ಶಾಲೆಗಳಿಗೆ ಸುತ್ತೋಲೆ ಹೊರಡಿಸುವಂತೆ ತೀರ್ಮಾನಿಸಲಾಯಿತು.

ಆಡಳಿತ ಮಂಡಳಿಯ ತೀರ್ಮಾನದಂತೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಪತ್ರ ಬರೆಯಲಾಗಿದ್ದು, ವಿಶೇಷಾಧಿಕಾರಿ, ಕೇಂದ್ರೀಕೃತ ದಾಖಲಾತಿ ಘಟಕ ಇವರು ಸೇವಾ ಕೃಪಾಂಕ ನೀಡಿ

ಆಯ್ಕೆಗೊಳಿಸಲಾದ ಬೋಧಕ ಸಿಬ್ಬಂದಿಗಳು 2020ರ ಸಾಲಿನ ಟಿ.ಇ.ಟಿ ಪರೀಕ್ಷೆಗೆ ಹಾಜರಾಗಲು ಆನ್ಲೈನ್ ಮೂಲಕ ನೊಂದಣಿ ಮಾಡಿಕೊಳ್ಳಲು ವ್ಯವಸ್ಥೆ ಮಾಡಬೇಕೆಂದು ಸೂಚಿಸಿದ್ದು, ಈ ಹಿನ್ನೆಲೆಯಲ್ಲಿ ಎಲ್ಲಾ ಶಿಕ್ಷಕರಿಗೆ ಟಿ.ಇ.ಟಿ ಪರೀಕ್ಷೆಗೆ ಹಾಜರಾಗಲು ಆನ್ಲೈನ್ ಮೂಲಕ ನೊಂದಣಿ ಮಾಡಿಕೊಳ್ಳಲು ಸೂಚಿಸಲಾಗಿದ್ದು, ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಈ ಕೆಳಕಂಡ ದಿನಾಂಕಗಳಂದು ಪರೀಕ್ಷೆ ನಡೆಸಿದ್ದು, ವಿವರಗಳು ಈ ಕೆಳಕಂಡಂತಿವೆ.

| ವರ್ಷ | ಪರೀಕ್ಷಾ ದಿನಾಂಕ | ಫಲಿತಾಂಶ ದಿನಾಂಕ |
|---|---|---|
| 2020 | 04.10.2020 | 06.11.2020 |
| 2021 | 22.08.2021 | 13.09.2021 |

ಮೇಲ್ಕಂಡಂತೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆ ರವರು ಪರೀಕ್ಷೆಗಳನ್ನು ನಡೆಸಿದ್ದು, ಪರೀಕ್ಷೆಗೆ ಹಾಜರಾಗಿ ಉತ್ತೀರ್ಣರಾದ 221 ಶಿಕ್ಷಕರುಗಳಿಗೆ ಖಾಯಂ ಪೂರ್ವ ಅವಧಿ ಘೋಷಿಸಲಾಗಿದೆ.

ಮೇಲ್ಕಂಡ ಪರೀಕ್ಷೆಗೆ ಹಾಜರಾಗಿ ನಪಾಸಾದ ಮತ್ತು ಪರೀಕ್ಷೆಗೆ ತಗೆದುಕೊಳ್ಳಲು ಅರ್ಹರಾಗಿರುವ 409 ಶಿಕ್ಷಕರುಗಳಿಗೆ ದಿನಾಂಕ:03.03.2022 ರಂದು ಜರುಗಿದ ಸಂಘದ 75 ನೇ ಆಡಳಿತ ಮಂಡಳಿಯ ಸಭೆಯಲ್ಲಿ ತರಬೇತಿಯೊಂದಿಗೆ ವಿಶೇಷ ಪರೀಕ್ಷೆಯನ್ನು ನಡೆಸಲು ನಿರ್ದೇಶಿಸಿದ ಹಿನ್ನೆಲೆಯಲ್ಲಿ ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ಬೆಂಗಳೂರು ಇವರನ್ನು ಕೋರಲಾಗಿರುತ್ತದೆ.

ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ರವರಿಗೆ ಸದರಿ ಶಿಕ್ಷಕರುಗಳಿಗೆ ತರಬೇತಿಯನ್ನು ನೀಡಿ ವಿಶೇಷ ಟಿ.ಇ.ಟಿ ಪರೀಕ್ಷೆ ನಡೆಸಲು ಅಗತ್ಯ ಕ್ರಮವಹಿಸುವಂತೆ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ರವರಿಗೆ ಮೂಲಕ ಶಿಕ್ಷಕರುಗಳಿಗೆ ತರಬೇತಿ ನೀಡಿ ಪರೀಕ್ಷೆಗಳನ್ನು ನಡೆಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಶಿಕ್ಷಕರುಗಳಿಗೆ ಖಾಯಂ ಪೂರ್ವ ಅವಧಿ ಘೋಷಿಸಲು ಕ್ರಮವಹಿಸಲಾಗುವುದು.

**ಸಕಇ 438 ಎಂಡಿಎಸ್ 2022**

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

C-79